# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 88 | Pages. 2 | Date: 06-03-2026, FRIDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 88 - ಪುಟಗಳು : 2 | 06-03-2026 | ಶುಕ್ರವಾರ | Ph: 8762954248 | ದರ : ₹1


## ಮಹಾನಗರ ಪಾಲಿಕೆ ಎಂಜಿನಿಯರ್‌ಗೆ ಲೋಕಾ ಶಾಕ್

### ಆದಾಯಕ್ಕಿಂತ ಶೇ. 200 ಅಧಿಕ ಆಸ್ತಿ | ಇಂದು ಮುಂದುವರಿಯಲಿದೆ ಕಾರ್ಯಾಚರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ರಾಜ್ಯದ ಆರು ಕಡೆ ಗುರುವಾರ ಬೆಳ್ಳಂ ಬೆಳಿಗ್ಗೆ ಲೋಕಾಯುಕ್ತ ಅಧಿಕಾರಿಗಳು ಭ್ರಷ್ಟ ಅಧಿಕಾರಿಗಳ ಮನೆ ಮೇಲೆ ದಾಳಿ ನಡೆಸಿದ್ದು, ಮಹಾನಗರ ಪಾಲಿಕೆ ಸಹಾಯಕ ಕಾರ್ಯಪಾಲಕ ಎಂಜಿನೀಯರ್ ಎಂ.ಸಿ.ಸತ್ಯನಾರಾಯಣ ಅವರ ನಿವಾಸದ ಮೇಲೆ ದಾಳಿ ನಡೆದಿದೆ.

ಆದಾಯಕ್ಕಿಂತ ಅಧಿಕ ಆಸ್ತಿ ಗಳಿಸಿರುವ ಆರೋಪದಡಿ ಲೋಕಾಯುಕ್ತ ಅಧೀಕ್ಷಕಿ ಬಿ.ಎನ್.ನಂದಿನಿ ಅವರ ನೇತೃತ್ವದಲ್ಲಿ 15 ಸಿಬ್ಬಂದಿ ದಾಳಿ ಮಾಡಿದರು.

ಅಧಿಕಾರಿಗಳು ಶುಕ್ರವಾರ ಸಹ ಪರಿಶೀಲನೆ ಮುಂದುವರಿಸಲಿದ್ದು, ಗುರುವಾರ ಸಂಜೆ ವೇಳೆಗೆ 6.82 ಕೋಟಿ ರೂ. ಆದಾಯ ಪತ್ತೆಯಾಗಿದೆ. ಇದು ಸತ್ಯನಾರಾಯಣ ಅವರ ಆದಾಯಕ್ಕಿಂತ ಶೇ. 200ರಷ್ಟು ಹೆಚ್ಚಿದೆಯೆಂದು ಲೋಕಾಯುಕ್ತ ಪ್ರಕಟಣೆಯಲ್ಲಿ ತಿಳಿಸಿದೆ.

ಸ್ಥಿರಾಸ್ತಿಯಲ್ಲಿ 6 ನಿವೇಶನ (52.60 ಲಕ್ಷ ರೂ), 3 ಮನೆ (5.30 ಕೋಟಿ ರೂ.), 3 ಎಕರೆ 33 ಗುಂಟೆ (15.75 ಲಕ್ಷ ರೂ.) ಇರುವುದು ಪತ್ತೆಯಾಗಿದೆ. ಚರಾಸ್ತಿಯಾಗಿ 15.75 ಲಕ್ಷ ರೂ.



ನಗದು, 1 ಕೆಜಿ 36 ಗ್ರಾಂ ಬಂಗಾರ (90.75 ಲಕ್ಷ ರೂ.), 11 ಕೆ.ಜಿ.208 ಗ್ರಾಂ ಬೆಳ್ಳಿ (18.22 ಲಕ್ಷ ರೂ.), 22 ಲಕ್ಷ ರೂ. ಬೆಲೆಯ 2 ಕಾರು ಹಾಗು ಇತರ ವಸ್ತುಗಳಿಂದ 25 ಲಕ್ಷ ರೂ. ಪತ್ತೆಯಾಗಿದೆ.

**ನಾಲ್ಕು ಗಂಟೆ ಕಾಯಿಸಿದ ಅಧಿಕಾರಿ**

ನಗರದ ರಕ್ಷಣಾ ಪುರಂನಲ್ಲಿರುವ ಮನೆಗೆ ಬೆಳಿಗ್ಗೆ 5.30ಕ್ಕೆ ಅಧಿಕಾರಿಗಳು ಭೇಟಿ ನೀಡಿದರು. ಸತ್ಯನಾರಾಯಣ ಅವರು ಮನೆಯಲ್ಲೇ ಇದ್ದರೂ ಮೊಬೈಲ್ ಸ್ವಿಚ್ಡ್ ಆಫ್ ಮಾಡಿ ಸತತ 4 ಗಂಟೆಗೂ ಹೆಚ್ಚು ಕಾಲ ಬಾಗಿಲು ತೆರೆಯದೆ ಸತಾಯಿಸಿದರು. ಮನೆಯ ಸಿಸಿಟಿವಿ ಕ್ಯಾಮರಾದಲ್ಲಿ ಲೋಕಾ ದಾಳಿಯ ಮಾಹಿತಿ ಅರಿತು ಲೈಟ್ ಆಫ್ ಮಾಡಿಕೊಂಡಿದ್ದರು ಎನ್ನಲಾಗಿದೆ.

ಇತ್ತ ಲೋಕಾಯುಕ್ತ ಅಧಿಕಾರಿಗಳು ಹೇಗಾದರೂ ಮಾಡಿ ಬಾಗಿಲು ತೆರೆಸಬೇಕೆಂದು ಹರಸಾಹಸ ಪಡಬೇಕಾಯಿತು. ಮನೆಯ ಮುಂದೆ ಕಾದು ನಿಂತ ಅಧಿಕಾರಿಗಳು ಕೊನೆಗೆ ವಿಧಿ ಇಲ್ಲದೆ ಕಟ್ಟಡದ ಮೇಲೆ ಹತ್ತಿ ಕಿಟಕಿ ಬಡಿದು ಕರೆದರೂ ಬಾಗಿಲು ತೆರೆಯಲಿಲ್ಲ. ಮನೆಯ ಸುತ್ತ ಓಡಾಡಿದರೂ ಪ್ರಯೋಜನವಾಗಲಿಲ್ಲ.

**ಸಹೋದರಿ ಬಂದ ಬಳಿಕ ತೆರೆದ ಬಾಗಿಲು**

ಬೆಳಿಗ್ಗೆ 9 ಗಂಟೆಯಾದರೂ ಬಾಗಿಲು ಓಪನ್ ಆಗದ ಹಿನ್ನೆಲೆಯಲ್ಲಿ ಲೋಕಾ ಅಧಿಕಾರಿಗಳು ರೋಸಿ ಹೋಗಿದ್ದರು. ಇದಾದ ಬಳಿಕ ಸತ್ಯನಾರಾಯಣ ಅವರ ಸಹೋದರಿ ಬಂದು ಬಾಗಿಲು ತೆರೆಯುವಂತೆ ಮನವಿ ಮಾಡಿದರು. ಆಗ ಅಧಿಕಾರಿಯ ಮಗ ಬಂದು ಗೇಟ್ ಬಾಗಿಲು ತೆರೆದನು. ಮನೆಯೊಳಗೆ ತೆರಳಿದ ಅಧಿಕಾರಿಗಳು, ಪರಿಶೀಲನೆ ಆರಂಭಿಸಿದರು. ಪರಿಶೀಲನೆಗೆ ಮುಂದಾದ ಅಧಿಕಾರಿಗಳು ಬೆಳಿಗ್ಗೆಯಿಂದ ರಾತ್ರಿವರೆಗೂ ತಪಾಸಣೆ ನಡೆಸಿದರು.

**ನಗರದ 7 ಕಡೆ ತಪಾಸಣೆ**

ಸತ್ಯನಾರಾಯಣ ಅವರ ಮನೆ ಸೇರಿದಂತೆ 7 ಕಡೆಗಳಲ್ಲಿ ಅಧಿಕಾರಿಗಳು ಪರಿಶೀಲನೆ ನಡೆಸಿದರು. ಮಹಾನಗರ ಪಾಲಿಕೆ ಕಚೇರಿ, ಸತ್ಯನಾರಾಯಣ ಅವರ ಪತ್ನಿ ಪಾಲುದಾರಿಕೆ ಹೊಂದಿರುವ ಖಾಸಗಿ ಶಾಲೆ ಮೇಲೂ ಲೋಕಾಯುಕ್ತ ಅಧಿಕಾರಿಗಳ ತಂಡ ದಾಳಿ ನಡೆಸಿತು.

2008 ರಿಂದ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಎಂ.ಸಿ.ಸತ್ಯನಾರಾಯಣ ಅವರು ಇತ್ತೀಚೆಗಷ್ಟೇ ಬಡ್ತಿ ಪಡೆದು, ಹಾಸನ ಮಹಾನಗರ ಪಾಲಿಕೆಯಲ್ಲಿ ಸಹಾಯಕ ಕಾರ್ಯಪಾಲಕ ಇಂಜಿನೀಯರ್ ಆಗಿದ್ದಾರೆ.

## ಮಾಹಿತಿ ಹಕ್ಕು ಕುರಿತು ನಾಳೆ ಕಾರ್ಯಾಗಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಸಾಂಸ್ಕೃತಿಕ ಸಮಿತಿಯಿಂದ ಮಾ.7ರ ಶನಿವಾರ ಬೆಳಿಗ್ಗೆ 10.30ಕ್ಕೆ ಮಾಹಿತಿ ಹಕ್ಕು ಕಾನೂನು ಪರಿಣಾಮಕಾರಿ ಅನುಷ್ಠಾನ ಕುರಿತು ಪತ್ರಕರ್ತರು ಮತ್ತು ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಕಾರ್ಯಾಗಾರ ಏರ್ಪಡಿಸಲಾಗಿದೆ ಎಂದು ಪತ್ರಕರ್ತರ ಸಂಘದ ಜಿಲ್ಲಾ ಉಪಾಧ್ಯಕ್ಷ ಎನ್.ನಂಜುಂಡೇಗೌಡ ಹೇಳಿದರು.

ಸುದ್ದಿಗೋಷ್ಟಿಯಲ್ಲಿ ಗುರುವಾರ ಮಾತನಾಡಿ, ಜಿಲ್ಲಾ ಪತ್ರಕರ್ತರ ಭವನದ ಡಿ.ವಿ.ಜಿ. ಸಭಾಂಗಣದಲ್ಲಿ ಕಾರ್ಯಕ್ರಮ ನಡೆಯಲಿದೆ. ರಾಜ್ಯ ಮಾಹಿತಿ ಹಕ್ಕು ಆಯುಕ್ತರಾದ ರುದ್ರಣ್ಣ ಹರ್ತಿಕೋಟೆ ಮತ್ತು ಕೆ.ಬದ್ರುದ್ದೀನ್ ಮಾಹಿತಿ ಹಕ್ಕು ಅನುಷ್ಠಾನ, ಬಳಕೆ ಕುರಿತು ಸಾರ್ವಜನಿಕರಿಗೆ ಸಹಾಯ ಮಾಡುವುದು ಹೇಗೆ ಎಂಬ ಬಗ್ಗೆ ಮಾಹಿತಿ




ನೀಡಲಿದ್ದಾರೆ ಎಂದರು.

ಸಾಂಸ್ಕೃತಿಕ ಸಮಿತಿ ಸಂಚಾಲಕ ಪ್ರಸನ್ನ ಕುಮಾರ್ (ಚಲಂ) ಮಾತನಾಡಿ, ಸ್ಟಡೀ ವಿಥ್ ಸೊಸೈಟಿಯಡಿ ಆರಂಭದಿಂದಲೂ ಪತ್ರರ್ತರು, ಪತ್ರಿಕೋದ್ಯಮ ವಿದ್ಯಾರ್ಥಿಗಳಿಗೆ ಅನುಕೂಲ ಆಗುವ ರೀತಿಯಲ್ಲಿ ಕಾರ್ಯಕ್ರಮ ಹಮಿಕೊಳ್ಳಲಾಗುತ್ತಿದೆ. ಮಾಹಿತಿ ಹಕ್ಕುಗಳ ಬಗ್ಗೆ ಹೆಚ್ಚಿನ ಮಾಹಿತಿ, ಜ್ಞಾನಾರ್ಜನೆ ಆರೋಗ್ಯಕರ ಬಳಕೆ ಹೇಗೆ ಎಂಬುದನ್ನು ತಿಳಿಸಿಕೊಡುವ ಪ್ರಯತ್ನ ಮಾಡಲಾಗುತ್ತಿದೆ. ಸ್ಟಡಿ ವಿಥ್ ಸರ್ಕಲ್ ಕಲಿಕೆಯ ತಾಣ, ಪ್ರತಿ ತಿಂಗಳ ಮೊದಲ ಶನಿವಾರ ಒಂದೊಂದು ರೀತಿಯ ಕಾರ್ಯಕ್ರಮ ಹಮಿಕೊಳ್ಳಲಾಗುತ್ತಿದೆ ಎಂದರು.

ಸುದ್ದಿಗೋಷ್ಟಿಯಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಕೆ.ಜಿ.ಸುರೇಶ್, ಸಾಂಸ್ಕೃತಿಕ ಸಮಿತಿ ಸದಸ್ಯರಾದ ಸಿ.ಆರ್.ನವೀನ್, ಪ್ರಕಾಶ್, ಮಲ್ಲಿಕಾರ್ಜುನ ಕೊಚ್ಚರಗಿ ಹಾಜರಿದ್ದರು.

## ರಸ್ತೆ ಅವಘಡ ನಿಯಂತ್ರಣಕ್ಕೆ ಕೆಆರ್‌ಎಸ್ ಒತ್ತಾಯ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ವಿವಿಧೆಡೆ ರಸ್ತೆ ಅಪಘಾತ ಸಂಭವಿಸಿ ಸಾವು ನೋವು ಸಂಭವಿಸುತ್ತಿದ್ದು, ಅವಘಡಕ್ಕೆ ಕಾರಣವಾಗುತ್ತಿರುವ ಅವೈಜ್ಞಾನಿಕ ಹಂಪ್ಸ್ ತೆರವುಗೊಳಿಸಿ ಸುರಕ್ಷತಾ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿ ಕರ್ನಾಟಕ ರಾಷ್ಟ್ರ ಸಮಿತಿ (ಕೆಆರ್‌ಎಸ್) ಪದಾಧಿಕಾರಿಗಳು ಗುರುವಾರ ಲೋಕೋಪಯೋಗಿ ಇಲಾಖೆ ಕಚೇರಿ ಎದುರು ಪ್ರತಿಭಟನೆ ನಡೆಸಿದರು. ಕೆಆರ್‌ಎಸ್ ತಾಲ್ಲೂಕು ಉಪಾಧ್ಯಕ್ಷ ಜಗದೀಶ್ ಅವರು ಮಾತನಾಡಿ, ಜಿಲ್ಲೆಯ ಪ್ರಮುಖ ರಸ್ತೆಗಳಲ್ಲಿ ನಿರ್ಮಿಸಿರುವ ಹಂಪ್ಸ್‌ಗಳಿಗೆ ಅಗತ್ಯ ಜೀಬ್ರಾ ಪಟ್ಟಿ ಅಳವಡಿಸಿಲ್ಲ. ರಾತ್ರಿ ವೇಳೆ ವಾಹನ ಚಾಲಕರು ಹಂಪ್ಸ್ ಗಮನಿಸಲು ರಿಫ್ಲೆಕ್ಟರ್ ಅಥವಾ ಪ್ರತಿಫಲನ ವ್ಯವಸ್ಥೆ ಇಲ್ಲದೆ ತೊಂದರೆ ಅನುಭವಿಸುತ್ತಿದ್ದಾರೆ. ಅದರಿಂದ ರಾತ್ರಿ ಸಮಯದಲ್ಲಿ ವಾಹನ ಸವಾರರು ಹಂಪ್ಸ್‌ಗಳನ್ನು ಗಮನಿಸದೆ ಅಪಘಾತಕ್ಕೀಡಾಗುವ ಸಂಭವ ಹೆಚ್ಚಾಗಿದೆಯೆಂದರು.

ಹಂಪ್ಸ್ ಇರುವುದನ್ನು ಚಾಲಕರು ಅರಿಯಲು 40 ರಿಂದ 50 ಮೀಟರ್ ದೂರದಲ್ಲಿ ಸೂಚನಾ ಫಲಕ ಅಳವಡಿಸಬೇಕು. ಇಂತಹ ಫಲಕಗಳು ಇಲ್ಲದಿರುವುದು ಅನಾಹುತಕ್ಕೆ ಎಡೆಮಾಡಿಕೊಡುತ್ತಿದೆ. ಕಳೆದ ಒಂದು ವರ್ಷದಿಂದ ರಸ್ತೆಗಳಲ್ಲಿ ಇರುವ ಜೀಬ್ರಾ ಪಟ್ಟಿ ಹಾಗು ಇತರೆ ಸುರಕ್ಷತಾ ಗುರುತುಗಳ ನಿರ್ವಹಣೆಯೂ ಸರಿಯಾಗಿ ಆಗುತ್ತಿಲ್ಲವೆಂದು ದೂರಿದರು. ಈ ನಿಟ್ಟಿನಲ್ಲಿ ಪರಿಹಾರ ಕ್ರಮ ಕೈಗೊಳ್ಳದಿದ್ದರೆ ಪ್ರತಿಭಟನೆ ನಡೆಸಬೇಕಾಗುತ್ತದೆಂದು ಎಚ್ಚರಿಕೆ ನೀಡಿದರು. ಕೆಆರ್‌ಎಸ್ ಜಿಲ್ಲಾಧ್ಯಕ್ಷ ಉಮೇಶ್ ಬೆಳಗುಂಬ, ಪ್ರಧಾನ ಕಾರ್ಯದರ್ಶಿ ಮಧು, ತಾಲೂಕು ಅಧ್ಯಕ್ಷ ನಿರಂಜನ್, ಸಾಮಾಜಿಕ ಹೋರಾಟಗಾರ ಅಂಚನಹಳ್ಳಿ ಜಗದೀಶ್, ಮಂಜೇಗೌಡ, ಪ್ರಕಾಶ್, ತಾಲ್ಲೂಕು ಉಪಾಧ್ಯಕ್ಷ ಜಗದೀಶ್ ಇತರರಿದ್ದರು.

## ಒಳಮೀಸಲಾತಿ ಗೊಂದಲ ಬಗೆಹರಿಸಲು ದಸಂಸ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಒಳ ಮೀಸಲಾತಿ ವಿಚಾರದಲ್ಲಿ ಪರಿಶಿಷ್ಟ ಜಾತಿಯ 101 ಜಾತಿಗಳ ನಡುವೆ ಉಂಟಾಗಿರುವ ಗೊಂದಲ ಮತ್ತು ಅನುಮಾನಗಳನ್ನು ಸರ್ಕಾರ ಶೀಘ್ರ ಬಗೆಹರಿಸಿ ಎಲ್ಲ ಜಾತಿಗಳಿಗೂ ಸಮಾನ ನ್ಯಾಯ ಒದಗಿಸಬೇಕು ಎಂದು ದಲಿತ ಸಂಘಟನೆಗಳ ಸಮನ್ವಯ ಸಮಿತಿ ಅಧ್ಯಕ್ಷ ಕೃಷ್ಣದಾಸ್ ಆಗ್ರಹಿಸಿದರು.

ಸುದ್ದಿಗೋಷ್ಟಿಯಲ್ಲಿ ಗುರುವಾರ ಮಾತನಾಡಿ, ನ್ಯಾ. ನಾಗಮೋಹನ್‌ದಾಸ್ ವರದಿಯ ಆಧಾರದ ಮೇಲೆ ಸರ್ಕಾರ ಪರಿಶಿಷ್ಟ ಜಾತಿಗಳನ್ನು 3 ಪ್ರವರ್ಗಗಳಾಗಿ ವಿಂಗಡಿಸಿ ಪ್ರವರ್ಗ-ಎ (ಮಾದಿಗ ಸಂಬಂಧಿತ ಜಾತಿಗಳು), ಪ್ರವರ್ಗ-ಬಿ (ಹೊಲೆಯ ಸಂಬಂಧಿತ ಜಾತಿಗಳು) ಮತ್ತು ಪ್ರವರ್ಗ-ಸಿ (ಕೊರಮ, ಲಮಾಣಿ, ಬೋವಿ ಸೇರಿ ಇತರ ಜಾತಿಗಳು) ಕ್ರಮವಾಗಿ




ಶೇ. 6:6:5ರಂತೆ ಮೀಸಲಾತಿ ನೀಡುವಂತೆ ಮಸೂದೆ ರೂಪಿಸಿದೆ. ಈ ಮಸೂದೆಗೆ ರಾಜ್ಯಪಾಲರ ಅಂಕಿತವೂ ದೊರೆತಿದೆ ಎಂದರು.

ಆದರೆ ರಾಜ್ಯದಲ್ಲಿ ಖಾಲಿ ಇರುವ ಹುದ್ದೆಗಳ ಪೈಕಿ ಮೊದಲಿಗೆ 56,432 ಹುದ್ದೆ ಭರ್ತಿ ಮಾಡಲು ಸಚಿವ ಸಂಪುಟ ತೀರ್ಮಾನಿಸಿದೆ. ನೇಮಕಾತಿ ವೇಳೆ 1995, ಜೂ.20 ರ ರೋಸ್ಟರ್ ನಿಯಮ ಅನ್ವಯಿಸುವುದಾಗಿ ಸೂಚಿಸಿರುವುದರಿಂದ ಹೊಸ ರೋಸ್ಟರ್ ವ್ಯವಸ್ಥೆಯಲ್ಲಿ ಪ್ರವರ್ಗ-ಬಿ ಹಾಗೂ ಪ್ರವರ್ಗ-ಸಿ ಸಮುದಾಯಗಳಿಗೆ ಅನ್ಯಾಯವಾಗುತ್ತದೆ ಎಂಬ ಆರೋಪ ಕೇಳಿಬಂದಿವೆ. ಉದಾಹರಣೆಗೆ ಒಂದು ಇಲಾಖೆಯಲ್ಲಿ 8 ಹುದ್ದೆ ಖಾಲಿ ಇದ್ದರೆ ಪ್ರವರ್ಗ-ಬಿ ಗೆ 9ನೇ ಸ್ಥಾನ ನೀಡಿರುವುದರಿಂದ ಆ ಸಮುದಾಯದವರಿಗೆ ಅವಕಾಶವೇ ಸಿಗದ ಪರಿಸ್ಥಿತಿ ಉಂಟಾಗುತ್ತದೆ ಎಂದು ಹೇಳಿದರು.

ಇದರಿಂದ ಪರಿಶಿಷ್ಟ ಜಾತಿಗಳೊಳಗೆ ಗೊಂದಲ ಮತ್ತು ಅಸಮಾಧಾನ ಹೆಚ್ಚುತ್ತಿದ್ದ, ಈ ಸಂಬಂಧ ಹೈಕೋರ್ಟ್‌ನಲ್ಲಿ ಎರಡು ಪ್ರಕರಣ ದಾಖಲಾಗಿವೆ. ಈ ನಡುವೆ ಮೀಸಲಾತಿ ಪ್ರಮಾಣ ಹೆಚ್ಚಳ ಪ್ರಶ್ನಿಸಿ ಹಾಗೂ ಪ್ರವರ್ಗ ಸಿ ವರ್ಗೀಕರಣ ವಿರೋಧಿಸಿ ಸಲ್ಲಿಸಿದ ಅರ್ಜಿಗಳ ಮೇಲೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ.

ಪರಿಣಾಮ ಒಳ ಮೀಸಲಾತಿ ಜಾರಿ ಅನಿಶ್ಚಿತತೆ ಮುಂದುವರಿದಿದೆ. ಈ ಗೊಂದಲಕ್ಕೆ ಹಿಂದಿನ ಬಿಜೆಪಿ ಸರ್ಕಾರ ಹಾಗೂ ಈಗಿನ ಕಾಂಗ್ರೆಸ್ ಸರ್ಕಾರ ಎರಡೂ ಕಾರಣ ಎಂದು ಆರೋಪಿಸಿದರು.

ರಾಜಕೀಯ ಲಾಭಕ್ಕಾಗಿ ಪರಿಶಿಷ್ಟ ಜಾತಿಗಳ ನಡುವೆ ಭಿನ್ನತೆ ಉಂಟುಮಾಡಲಾಗುತ್ತಿದೆ. ಸಚಿವ ಡಾ.ಎಚ್.ಸಿ. ಮಹದೇವಪ್ಪ ವಿರುದ್ಧ ವ್ಯಕ್ತಿಗತ ಟೀಕೆ ನಡೆಸುತ್ತಿರುವುದು ಸರಿಯಲ್ಲ ಎಂದ ಅವರು, ಈ ಸಂಬಂಧ ಸಚಿವ ಸಂಪುಟ ಸಭೆಯಲ್ಲಿ ಸೂಕ್ತ ನಿರ್ಧಾರ ಮಾಡಬೇಕು ಎಂದು ಮನವಿ ಮಾಡಿದರು.

ಸರ್ಕಾರ ಕೂಡಲೇ ಮಧ್ಯಸ್ಥಿಕೆ ವಹಿಸಿ ರೋಸ್ಟರ್ ಬಿಂದುಗಳ ಬಗ್ಗೆ ಒಮ್ಮತ ಸೂತ್ರ ಪ್ರಕಟಿಸಿ ಪರಿಶಿಷ್ಟ ಜಾತಿಯ 101 ಜಾತಿಗಳಿಗೂ ಅನ್ಯಾಯವಾಗದಂತೆ ಕ್ರಮ ಕೈಗೊಳ್ಳಬೇಕು. ಒಳ ಮೀಸಲಾತಿ ಜಾರಿಗೆ ಮೇಲ್ವಿಚಾರಣೆ ಮಾಡಲು ಶಾಶ್ವತ ಆಯೋಗ ರಚಿಸಬೇಕು ಹಾಗೂ 2000ಕ್ಕೂ ಹೆಚ್ಚು ಬ್ಯಾಕ್‌ಲಾಗ್ ಹುದ್ದೆಗಳನ್ನು ತಕ್ಷಣ ಭರ್ತಿ ಮಾಡಬೇಕು, ಅಲೆಮಾರಿ ಹಾಗೂ ಅರೆ ಅಲೆಮಾರಿ ಸಮುದಾಯಗಳಿಗೆ ಪ್ರತ್ಯೇಕವಾಗಿ ಶೇ.1ರಷ್ಟು ಮೀಸಲಾತಿ ಒದಗಿಸಬೇಕು ಎಂದು ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮುಖಂಡರಾದ ಈರೇಶ್ ಹಿರೇಹಳ್ಳಿ, ಛಲವಾದಿ ಮಹಾ ಮಂಡಲ ರಾಜ್ಯಾಧ್ಯಕ್ಷ ಪುಟ್ಟರಾಜಪ್ಪ, ತಾಲೂಕು ಅಧ್ಯಕ್ಷ ರಂಗಸ್ವಾಮಿ, ಕರ್ನಾಟಕ ಹಂದಿ ಜೋಗಿ ಸಂಘದ ಉಪಾಧ್ಯಕ್ಷ ಗೋವಿಂದ ರಾಜ್, ಹರೀಶ್ ಉಳುವಾರೆ, ಹಿರಿಯ ಮುಖಂಡ ನಾರಾಯಣ್ ದಾಸ್ ಇದ್ದರು.

## ಮಾ. 11 ರಿಂದ 15ರ ವರೆಗೆ ಸರ್ಕಾರಿ ವೈದ್ಯರ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ನೌಕರರ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಮಾ. 11 ರಿಂದ 15ರ ವರೆಗೆ ಪ್ರತಿಭಟನೆ ನಡೆಸಲಾಗುವುದು ಎಂದು ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷ ಡಾ. ಬಿ.ಎಂ.ವಿಜಯ್ ಹೇಳಿದರು.

ಸುದ್ದಿಗೋಷ್ಟಿಯಲ್ಲಿ ಗುರುವಾರ ಮಾತನಾಡಿ, ನಾವು ಸರ್ಕಾರಕ್ಕೆ ಸಲ್ಲಿಸಿರುವ ಬೇಡಿಕೆಗಳು ಆರ್ಥಿಕವಾಗಿ ಹೊರೆಯಾಗುವುದಿಲ್ಲ. ಆದರೂ ವೈದ್ಯಕೀಯ ಸೇವೆಯನ್ನು ಹಗುರವಾಗಿ ಪರಿಗಣಿಸಲಾಗುತ್ತಿದೆ. ಸಂಬಂಧಪಟ್ಟ ಸಚಿವರು ಹಾಗು ಪ್ರಧಾನ ಕಾರ್ಯದರ್ಶಿ ಕ್ರಮ ಕೈಗೊಂಡರೆ ಸಮಸ್ಯೆ ಇತ್ಯರ್ಥವಾಗುತ್ತದೆ. ಸರ್ಕಾರ ಅದಕ್ಕೂ ಮನಸ್ಸು ಮಾಡದೆ ಇರುವುದು ಬೇಸರ ತರಿಸಿದೆ




ಎಂದರು.

ಮಾ. 11 ರಿಂದ 15ರ ವರೆಗೆ ಹೊರ ರೋಗಿಗಳ ಸೇವೆ ಸ್ಥಗಿತಗೊಳಿಸಿ, ತುರ್ತು ಸೇವೆ ಮಾತ್ರ ನೀಡಲಾಗುತ್ತದೆ. ನಮ ಮನವಿಗೆ ಸ್ಪಂದನೆ ಸಿಗದಿದ್ದರೆ ಎರಡನೇ ಹಂತವಾಗಿ ಮಾ. 16 ರಿಂದ ಕರ್ತವ್ಯಕ್ಕೆ ಗೈರಾಗಿ ಪ್ರತಿಭಟನೆ ಮಾಡಬೇಕಾಗುತ್ತದೆಂದು ಎಚ್ಚರಿಕೆ ನೀಡಿದರು.

ಕಾಲ ಕಾಲಕ್ಕೆ ಆಸ್ಪತ್ರೆಗಳಿಗೆ ಔಷಧಿ ಪೂರೈಕೆ ಮಾಡುವುದು ಸರ್ಕಾರದ ಜವಾಬ್ದಾರಿಯಾದರೂ ಇತ್ತೀಚೆಗೆ ಆ ನಿಟ್ಟಿನಲ್ಲಿ ಭಾರೀ ವಿಳಂಬವಾಗುತ್ತಿದೆ. ಈ ಸಮಸ್ಯೆ ಉಲ್ಬಣವಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು.

ಔಷಧಿ ಖರೀದಿ ಟೆಂಡರ್ ಕೆಲಸದಿಂದ ವೈದ್ಯರನ್ನು ಮುಕ್ತಗೊಳಿಸಬೇಕು. ಜಿಲ್ಲೆಯಲ್ಲಿ 995 ಹುದ್ದೆಗಳು ಖಾಲಿ ಇದ್ದು ಶೀಘ್ರ ಭರ್ತಿ ಮಾಡಬೇಕು. ಗುತ್ತಿಗೆ ವೈದ್ಯರು ಹಾಗು ಡಿ ದರ್ಜೆ ನೌಕರರ ವೇತನ ಪಾವತಿ ವಿಳಂಬವಾಗುತ್ತಿದ್ದು, ಪ್ರತಿ ತಿಂಗಳು ತಪ್ಪದೇ ಸಂಬಳ ಪಾವತಿಸಬೇಕು. ಹೀಗೆ ನಾನಾ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಮುಷ್ಕರ ಹಮಿಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.

ರಾಜ್ಯ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ.ಬಿ.ಎಲ್.ನಿರ್ವಾಣಿರಾವ್, ಕಾರ್ಯದರ್ಶಿ ಡಾ. ಜಿ.ಎನ್.ಜಗದೀಶ್, ಸರ್ಕಾರಿ ವೈದ್ಯಾಧಿಕಾರಿಗಳ ಸಂಘದ ಕಾರ್ಯದರ್ಶಿ ಡಾ. ಎಂ.ವಿ.ಸಂತೋಷ್, ಖಜಾಂಚಿ ಡಾ. ತೇಜಸ್ವಿ, ಡಾ. ಸಂತೋಷ್, ಡಾ. ಪ್ರಕಾಶ್ ಹಾಜರಿದ್ದರು.

## ಮಾ. 9ರಿಂದ ಜೀ ಕನ್ನಡದಲ್ಲಿ 'ಕೃಷ್ಣ-ರುಕ್ಕು' ಧಾರಾವಾಹಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು: ಸದಾ ಹೊಸತನದೊಂದಿಗೆ ವೀಕ್ಷಕರನ್ನು ಮನರಂಜಿಸಿ ನಂ.1 ಸ್ಥಾನ ಪಡೆದಿರುವ ಜೀ಼ ಕನ್ನಡ 2026 ಶುರುವಿಗೆ ಮತ್ತೊಂದು ಸರ್ಪ್ರೈಸ್ ನೀಡಲು ಸಜ್ಜಾಗಿದೆ.

ಪ್ರೀತಿ, ಪ್ರತೀಕಾರ ಮತ್ತು ವಿಧಿಯಾಟದ ಸುತ್ತ ನಡೆಯುವ ಹೊಚ್ಚ ಹೊಸ ಧಾರಾವಾಹಿ 'ಕೃಷ್ಣ ರುಕ್ಕು' ಮಾ. 9 ರಿಂದ ಸಂಜೆ 6.30ಕ್ಕೆ ಜೀ಼ ಕನ್ನಡದಲ್ಲಿ ಪ್ರಸಾರವಾಗಲಿದೆ. ಕುಟುಂಬದ ಒಗ್ಗಟ್ಟು, ಜವಾಬ್ದಾರಿ, ಪ್ರೀತಿ ಜೊತೆಗೆ ಅನಿರೀಕ್ಷಿತ ತಿರುವುಗಳು ಕೂಡ ಕೃಷ್ಣ-ರುಕ್ಕು ಧಾರಾವಾಹಿಯಲ್ಲಿ ಕಾಣಸಿಗಲಿದೆ. ಅಣ್ಣನ ಅಕಾಲಿಕ ನಿಧನದ ನಂತರ ತನ್ನ ಇಡೀ ಕುಟುಂಬದ ಜವಾಬ್ದಾರಿಯನ್ನು ತನ್ನ ಹೆಗಲ ಮೇಲೆ ಹಾಕಿಕೊಂಡ ರುಕ್ಕು ಏನೆಲ್ಲಾ ಸವಾಲು ಎದುರಿಸುತ್ತಾಳೆ ಎಂಬುದನ್ನು ಇಲ್ಲಿ ತೋರಿಸಲಾಗಿದೆ.


ಪ್ರೀತಿ, ದ್ವೇಷ ಮತ್ತು ವಿಧಿಯಾಟದ ನಡುವೆ ಕೃಷ್ಣ-ರುಕ್ಕುವಿನ ಜೀವನ ಹೀಗೆ ಸಾಗಲಿದೆ ಎನ್ನುವುದು ಈ ಧಾರಾವಾಹಿಯ ಮತ್ತೊಂದು ಕುತೂಹಲಕಾರಿ ಅಂಶ. ಮೌನ ಗುಡ್ಡೇಮನೆ ರುಕ್ಕು ಆಗಿ ನಟಿಸಿದರೆ, ಅಕ್ಷಯ್ ನಾಯಕ್ ಕೃಷ್ಣನ ಪಾತ್ರ ನಿರ್ವಹಿಸಲಿದ್ದಾರೆ. ಹಿರಿತೆರೆ ಕಿರುತೆರೆಯ ನಿರ್ದೇಶಕ,




ನಿರ್ಮಾಪಕ, ಬರಹಗಾರ, ನಟ, ಕಲಾ ಸಾಮ್ರಾಟ್ ಎಸ್.ನಾರಾಯಣ್ ಅವರು, ಸೂರ್ಯ ಪ್ರಕಾಶ್ ಎಂಬ ಮಹತ್ವದ ಪಾತ್ರ ನಿರ್ವಹಿಸುವ ಮೂಲಕ ತಂಡಕ್ಕೆ ಬಲ ನೀಡಿದ್ದಾರೆ. ಹಲವು ವರ್ಷಗಳ ನಂತರ ಕನ್ನಡ ಕಿರುತೆರೆಗೆ ಕಮ್ ಬ್ಯಾಕ್ ಆಗಿದ್ದಾರೆ ಖ್ಯಾತ ನಟಿ ಸುಚಿತ್ರ, ಗಾಯಕ ನವೀನ್ ಸಜ್ಜು ಹೀಗೆ ಮುಂತಾದ ಅತ್ಯದ್ಭುತ ಕಲಾವಿದರುಗಳು ನಟಿಸಿರುವುದು ಈ ಧಾರಾವಾಹಿಯ ತೂಕವನ್ನು ಹೆಚ್ಚಿಸುತ್ತದೆ. ಧೃತಿ ಕ್ರಿಯೇಷನ್ಸ್ ಬ್ಯಾನರ್ ಅಡಿಯಲ್ಲಿ ದಿಲೀಪ್ ರಾಜ್ ಹಾಗೂ ವಿದ್ಯಾ ನಿರ್ಮಿಸಿರುವ ಕೃಷ್ಣ-ರುಕ್ಕು ಧಾರಾವಾಹಿಯಲ್ಲಿ ಮನಸೆಳೆಯುವ ಕಥೆ ಮತ್ತು ಭಾವನಾತಕ ಅಭಿನಯಗಳು ಪ್ರೇಕ್ಷಕರಿಗೆ ಕಾಣಸಿಗಲಿದೆ.

ಕೃಷ್ಣ-ರುಕ್ಕು ಧಾರಾವಾಹಿ ಬಗ್ಗೆ ಮಾತನಾಡಿದ ಜೀ಼ ಕನ್ನಡ ವಾಹಿನಿಯ ಚೀಫ್ ಚಾನೆಲ್ ಆಫೀಸರ್ ದೀಪಕ್ ಶ್ರೀರಾಮುಲು ಅವರು, ಜೀ ಕನ್ನಡ ವಾಹಿನಿ ಯಾವಾಗಲೂ ಪ್ರೇಕ್ಷಕರ ಮನಸ್ಸಿಗೆ ಹತ್ತಿರವಾಗುವ ನೈಜ ಭಾವನೆಗಳು ಮತ್ತು ಕೌಟುಂಬಿಕ ಮೌಲ್ಯಗಳನ್ನೊಳಗೊಂಡ ಕಥೆಗಳನ್ನು ವೀಕ್ಷಕರಿಗೆ ತಲುಪಿಸಲು ಇಚ್ಚಿಸುತ್ತದೆ. ಕೃಷ್ಣ-ರುಕ್ಕು ಧಾರಾವಾಹಿಯು ಪ್ರೀತಿ, ಜವಾಬ್ದಾರಿ ಮತ್ತು ವಿಧಿಯಾಟದ ಸುತ್ತ ನಡೆಯುವ ಒಂದು ಸುಂದರವಾದ ಕಥೆಯಾಗಿದೆ. ಈ ಧಾರಾವಾಹಿಯಲ್ಲಿನ ವೈವಿಧ್ಯಮಯ ಪಾತ್ರಗಳು ಮತ್ತು ಕುತೂಹಲಕಾರಿ ಕಥೆಯು ವೀಕ್ಷಕರ ಮನಸ್ಸನ್ನು ಗೆಲ್ಲುವುದಲ್ಲದೆ, ನಮ ಕಾರ್ಯಕ್ರಮಗಳನ್ನು ಇನ್ನಷ್ಟು ಬಲಪಡಿಸಲಿದೆ ಎಂಬ ನಂಬಿಕೆ ನಮಗಿದೆ ಎಂದರು.

## ಶ್ರವಣಬೆಳಗೊಳದಲ್ಲಿ ಇಂದು ಸಂಘಟನಾ ಪರ್ವ



ಚನ್ನರಾಯಪಟ್ಟಣ: ಸಂಘಟನೆ ಬಲಪಡಿಸುವ ಉದ್ದೇಶದಿಂದ ಮಾ.6 ರಂದು ಸಂಘಟನಾ ಪರ್ವ ಕಾರ್ಯಕ್ರಮವನ್ನು ಶ್ರವಣಬೆಳಗೊಳದಲ್ಲಿ ಆಯೋಜಿಸಲಾಗಿದೆ ಎಂದು ಬಿಜೆಪಿ ಮುಖಂಡ ಸಿ.ಆರ್. ಚಿದಾನಂದ್ ತಿಳಿಸಿದರು.

ಗುರುವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿ, ಹಿಂದುತ್ವ ಮತ್ತು ಸಂಘಟನಾತಕ ಕೆಲಸದ ಜೊತೆಗೆ ಬಿಜೆಪಿಯನ್ನು ಗಟ್ಟಿಗೊಳಿಸುವ ಕೆಲಸ ತಾಲೂಕಿನಲ್ಲಿ ನಡೆಯುತ್ತಿದೆ. ಶ್ರವಣಬೆಳಗೊಳ ಮಂಡಳದ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ 43 ಬೂತ್‌ಗಳಲ್ಲಿ ಬೂತ್ ಮಟ್ಟದಿಂದ ಬಿಜೆಪಿಯಲ್ಲಿ ಸದಸ್ಯತ್ವ ಸಂಖ್ಯೆ ಹೆಚ್ಚಿಸುವ ಕಾರ್ಯಕ್ರಮ ಪೂರ್ಣಗೊಂಡಿದ್ದು ಪಕ್ಷಕ್ಕೆ ಸೇರ್ಪಡೆಯಾಗಿರುವ ಕಾರ್ಯಕರ್ತರಿಗೆ ವೇದಿಕೆ ಕಲ್ಪಿಸುವ ಉದ್ದೇಶದಿಂದ ಸಂಘಟನಾ ಪರ್ವ ಹಮಿಕೊಳ್ಳಲಾಗಿದೆ ಎಂದು ತಿಳಿಸಿದರು.

## ಜಿಲ್ಲಾಧಿಕಾರಿ ಕಚೇರಿಯಲ್ಲಿ ಸಂಸದರ ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಂಸದ ಶ್ರೇಯಸ್ ಪಟೇಲ್ ಅವರು ಗುರುವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ರೈಲ್ವೆ ಹಾಗು ಹೆದ್ದಾರಿ ಕಾಮಗಾರಿ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಿದರು.

ರೈಲ್ವೆ ಇಲಾಖೆಗೆ ಸಂಬಂಧಿಸಿದಂತೆ ಎಲ್‌ಸಿ-3 (ಹಾಸನ), ಹೊಳೆನರಸೀಪುರಮಾವಿನಕೆರೆ, ಹಾಸನಅರಸೀಕೆರೆ ಮಾರ್ಗ ಹಾಗು ಮೊಸಳೆಹೊಸಹಳ್ಳಿಯಲ್ಲಿ ರೈಲ್ವೆ ಮೇಲ್ಸೇತುವೆ ನಿರ್ಮಾಣಕ್ಕೆ ವೇಗ ನೀಡಬೇಕು. ಬೇಲೂರು-ಹಾಸನ ರೈಲ್ವೆ ಹಳಿ ನಿರ್ಮಾಣಕ್ಕೆ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಂಡಿದೆ. ಕಾಮಗಾರಿಯನ್ನು ತ್ವರಿತಗತಿಯಲ್ಲಿ ಆರಂಭಿಸಬೇಕು ಎಂದರು. ಜಿಲ್ಲೆಯ ವಿವಿಧ ರೈಲ್ವೆ ನಿಲ್ದಾಣಗಳ ನಿರ್ವಹಣೆ ಹಾಗೂ ದುದ್ದದಲ್ಲಿ ಮೇಲ್ಸೇತುವೆ ನಿರ್ಮಾಣ ಸಂಬಂಧ ವರದಿ ಸಲ್ಲಿಸಬೇಕೆಂದು ಅಧಿಕಾರಿಗಳಿಗೆ ನಿರ್ದೇಶನ




ನೀಡಿದರು.

ರಾಷ್ಟ್ರೀಯ ಹೆದ್ದಾರಿ-69 (ಬಾಣಾವರ-ಹುಳಿಯಾರು), ಎನ್‌ಹೆಚ್-73 (ಚಿಕ್ಕನಾಯಕನಹಳ್ಳಿಬಾಣಾವರ), ಎನ್‌ಹೆಚ್ 75 (ಬೆಂಗಳೂರುಮಂಗಳೂರು), ಎನ್‌ಹೆಚ್373 (ಹಾಸನಬೇಲೂರು) ಮಾರ್ಗಗಳ ಕಾಮಗಾರಿ, ಹಂಗರಹಳ್ಳಿಯಲ್ಲಿ ಮೇಲ್ಸೇತುವೆ ನಿರ್ಮಾಣ ಹಾಗು ಹೊಳೆನರಸೀಪುರ ಬೈಪಾಸ್ ಕಾಮಗಾರಿಗಳ ಕುರಿತು ಚರ್ಚಿಸಿದರು. ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ, ಡಿಎಫ್‌ಓ ಸೌರಭ್‌ಕುಮಾರ್, ಉಪವಿಭಾಗಾಧಿಕಾರಿ ಜಗದೀಶ್ ಗಂಗಣ್ಣನವರ್ ಮತ್ತಿತರರಿದ್ದರು.

# ಭೂ ಸುರಕ್ಷಾ ಯೋಜನೆಯಡಿ ಆಸ್ತಿ ಡಿಜಿಟಲೀಕರಣಗೊಳಿಸಿ

## ಮುಜರಾಯಿ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಸೂಚನೆ । ಪ್ರಗತಿ ಪರಿಶೀಲನಾ ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಎಲ್ಲಾ ತಾಲ್ಲೂಕುಗಳಲ್ಲಿ ಭೂ ಸುರಕ್ಷಾ ಯೋಜನೆಯಡಿ ದಾಖಲೆಗಳ ಡಿಜಿಟಲೀಕರಣವನ್ನು ಕೂಡಲೇ ಪೂರ್ಣಗೊಳಿಸಬೇಕೆಂದು ಕಂದಾಯ ಇಲಾಖೆ ಹಾಗೂ ಮುಜರಾಯಿ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ ಹೇಳಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ಮುಜರಾಯಿ ಇಲಾಖೆ ಹಾಗು ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿ, ದಾಖಲೆಗಳನ್ನು ಡಿಜಿಟಲೀಕರಣ ಮಾಡುವ ವೇಳೆಯಲ್ಲಿ ಎ.ಬಿ.ಸಿ.ಡಿ. ಯಾಗಿ ದಾಖಲೆಗಳನ್ನು ವರ್ಗೀಕರಿಸಿ ಸ್ಕ್ಯಾನ್ ಮಾಡಬೇಕು, ಹೆಚ್ಚುವರಿ ಸಿಬ್ಬಂದಿ ನೇಮಿಸಿಕೊಂಡು ಡಿಜಿಟಲೀಕರಣ ಮಾಡಬೇಕೆಂದರು.

ಪೌತಿ ಖಾತೆ ಆಂದೋಲನದ ಸಮರ್ಪಕವಾಗಿ ಅನುಷ್ಠಾನವಾದರೆ ಜನರಿಗೆ ಅನುಕೂಲವಾಗುತ್ತದೆ.




ಜಿಲ್ಲೆಯಲ್ಲಿ ಬಾಕಿ ಇರುವ ಕಂದಾಯ ಗ್ರಾಮ ಗುರುತಿಸಿ ಕೂಡಲೇ ಪ್ರಸ್ತಾವನೆಯನ್ನು ಸಲ್ಲಿಸುವಂತೆ ತಿಳಿಸಿದರು.

ಸರ್ಕಾರಿ ಜಮೀನು ಹಾಗು ಕೆರೆ ಒತ್ತುವರಿ ತೆರವಿಗೆ ಕ್ರಮ ವಹಿಸಬೇಕು, ತಾಲ್ಲೂಕುಗಳಿಗೆ ಅನುಮೋದನೆಯಾಗಿರುವ ಗ್ರಾಮ ಆಡಳಿತಾಧಿಕಾರಿಗಳ ಹುದ್ದೆ ಹಾಗು ತಹಶೀಲ್ದಾರ್ ಕಚೇರಿಗೆ ಅನುಮೋದನೆಯಾಗಿರುವ ಹುದ್ದೆಗಳ ವಿವರ, ಖಾಲಿ ಇರುವ ಹುದ್ದೆಗಳ ವಿವರ ವರದಿಯನ್ನು ಸಲ್ಲಿಸುವಂತೆ ತಿಳಿಸಿದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾ ಕುಮಾರಿ ಮಾತನಾಡಿ, ಮಾರ್ಚ್ ಅಂತ್ಯದೊಳಗೆ ಅರಕಲಗೂಡು, ಸಕಲೇಶಪುರ, ಆಲೂರು, ಅರಸೀಕೆರೆ ಹಾಗೂ ಹಾಸನ ಜಿಲ್ಲಾಧಿಕಾರಿ ಕಚೇರಿಯ ದಾಖಲೆಗಳನ್ನು ಪೂರ್ಣಗೊಳಿಸಲಾಗುವುದೆಂದರು.

ಜಿಲ್ಲೆಯಲ್ಲಿ 2308 ದೇವಸ್ಥಾನ ಹಾಗು ಆಸ್ತಿಗಳಿಗೆ ಖಾತೆ ಇದೆ. 546 ಆಸ್ತಿಗಳ ಖಾತೆ ನಿರ್ವಹಣೆ ಬಾಕಿ ಇದೆ. 1562 ಮುಜರಾಯಿ ದೇವಸ್ಥಾನ ಅಥವಾ ಆಸ್ತಿಗಳಿಗೆ ಧಾರ್ಮಿಕ ದತ್ತಿ ಇಲಾಖೆ ಎಂದು ನವೀಕರಿಸಲಾಗಿದೆಯೆಂದರು.

ರಾಜೇಂದ್ರ ಕುಮಾರ್ ಕಟಾರಿಯಾ ಮಾತನಾಡಿ, ಜಿಲ್ಲೆಯ ಎಲ್ಲಾ ದೇವಸ್ಥಾನಗಳ ಆಸ್ತಿ ಸಂರಕ್ಷಣೆ ವಿಚಾರದಲ್ಲಿ ನಿರ್ಲಕ್ಷ್ಯ ತೋರದೆ ತಕ್ಷಣ ಕ್ರಮ ಕೈಗೊಳ್ಳಬೇಕು. ಜಿಲ್ಲೆಯ 2456 ದೇವಸ್ಥಾನಗಳ ಹೆಸರಿನಲ್ಲಿ ಅಧಿಸೂಚನೆ ಹೊರಡಿಸಬೇಕು. ಮುಜರಾಯಿ ಇಲಾಖೆಗೆ ಸೇರಿದ ದೇವಸ್ಥಾನ ಆಸ್ತಿ ರಕ್ಷಣೆಯನ್ನು ಆದ್ಯತೆಯಾಗಿ ಪರಿಗಣಿಸಬೇಕು ಎಂದರು.

ಅಧಿಸೂಚನೆ ಹೊರಡಿಸಲು ಪ್ರಸ್ತಾವನೆ ಸಲ್ಲಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ದೇವಸ್ಥಾನದ ಹೆಸರು ಹಾಗೂ ವಿಳಾಸ ಪರಿಶೀಲಿಸಿ ಸಲ್ಲಿಸಬೇಕು. ಅಧಿಸೂಚನೆ ಬಳಿಕವು ಪರಿಶೀಲಿಸಿಕೊಳ್ಳಬೇಕು. ಮುಜರಾಯಿ ಇಲಾಖೆಗೆ ಒಳಪಡುವ ಎಲ್ಲಾ ದೇವಸ್ಥಾನ ಆಸ್ತಿಗಳಿಗೆ ಇ-ಖಾತೆ ಹಾಗು ಜಮೀನು ಇದ್ದರೆ ಪಹಣಿ, ದೇವಸ್ಥಾನದ ಆಸ್ತಿ ಒತ್ತುವರಿ ಆಗದಂತೆ ಎಚ್ಚರ ವಹಿಸಬೇಕು ಎಂದರು.

ಎಲ್ಲಾ ದೇವಸ್ಥಾನ ಹಾಗು ಆಸ್ತಿಗಳು ಸರ್ವೆ ಆಗಿರಬೇಕು. ಸಮೀಕ್ಷೆಯಾದ ನಂತರ ಒತ್ತುವರಿಯಾಗಿದ್ದರೆ ತೆರವುಗೊಳಿಸಿ ತಂತಿ ಬೇಲಿ ಅಥವಾ ಕಾಂಪೌಂಡ್ ನಿರ್ಮಿಸುವಂತೆ ಸೂಚಿಸಿದರು.

ಮುಜರಾಯಿ ಇಲಾಖೆಗೆ ಒಳಪಡುವ ಎಲ್ಲಾ ದೇವಸ್ಥಾನಗಳಿಗೆ ಕಡ್ಡಾಯವಾಗಿ ದೇವಸ್ಥಾನ ಹೆಸರು, ವಿಳಾಸ ಯಾವ ದರ್ಜೆಯ ದೇವಸ್ಥಾನ ಎಂಬುದರ ನಾಮಫಲಕವನ್ನು ಅಳವಡಿಸಬೇಕೆಂದು ನಿರ್ದೇಶನ ನೀಡಿದರು.

ಮುಜರಾಯಿ ಇಲಾಖೆ ಆಯುಕ್ತ ಶರತ್ ಅವರು ಮಾತನಾಡಿ, ಜಿಲ್ಲೆಯಲ್ಲಿ 6 ಎ ದರ್ಜೆಯ ದೇವಸ್ಥಾನ, 6 ಬಿ ದರ್ಜೆಯ ದೇವಸ್ಥಾನ ಹಾಗು 2,444 ಸಿ ದರ್ಜೆಯ ದೇವಸ್ಥಾನಳಿವೆ. 1,796 ದೇವಸ್ಥಾನಗಳು ಅಧಿಸೂಚನೆ ಹೊರಡಿಸಲು ಪ್ರಸ್ತಾವನೆ ಸಲ್ಲಿಸಲಾಗಿದೆ ಕೂಡಲೇ ಅಧಿಸೂಚನೆಗೆ ಕ್ರಮ ವಹಿಸಲಾಗುವುದೆಂದರು.

1562 ಮುಜರಾಯಿ ದೇವಸ್ಥಾನ ಹಾಗು ಆಸ್ತಿಗಳಲ್ಲಿ 691 ಪಹಣಿ, 808 ಗ್ರಾಮ ಠಾಣಾ ವ್ಯಾಪ್ತಿ, 63 ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗೆ ಬರುತ್ತದೆಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಜಗದೀಶ್ ಗಂಗಣ್ಣನವರ್, ಭೂ ದಾಖಲೆಗಳ ಇಲಾಖೆ ಉಪನಿರ್ದೇಶಕಿ ಹೇಮಲತಾ, ಎಲ್ಲಾ ತಹಶೀಲ್ದಾರ್‌ಗಳಿದ್ದರು.

## ಪುಲ್ವಾಮಾ ವೀರ ಯೋಧರ ಸ್ಮರಣಾರ್ಥ ಆರೋಗ್ಯ ಶಿಬಿರ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರೇಹಳ್ಳಿ: ಬೇಲೂರು ತಾಲ್ಲೂಕು ಬಿಕ್ಕೋಡಿನ ಗಣಪತಿ ಪೆಂಡಾಲ್‌ನಲ್ಲಿ ಲಯನ್ಸ್ ಸೇವಾ ಸಂಸ್ಥೆ ಹಾಗೂ ಅಡಗೂರು ಯೋಗ ಚೇತನ ಕೇಂದ್ರದಿಂದ ಪುಲ್ವಾಮಾ ದಾಳಿಯಲ್ಲಿ ವೀರ ಮರಣವಪ್ಪಿದ ಯೋಧರ ಸರಣಾರ್ಥ ಆರೋಗ್ಯ ಉಚಿತ ತಪಾಸಣೆ, ನೇತ್ರ, ದಂತ ತಪಾಸಣೆ ಮತ್ತು ರಕ್ತದಾನ ಶಿಬಿರ ಏರ್ಪಡಿಸಲಾಗಿತ್ತು.

ಯೋಗ ಗುರು ಚೇತನ್ ಗುರೂಜಿ ಮಾತನಾಡಿ, ಸಮಾಜಕ್ಕೆ ಪೂರಕವಾದ ಚಟುವಟಿಕೆಗಳನ್ನು ಲಯನ್ಸ್‌ಸಂಸ್ಥೆ ಪ್ರತಿ ವರ್ಷ ಆಯೋಜಿಸುತ್ತಿದೆ. ಇಂತಹ ಸಮಾಜಮುಖಿ ಚಟುವಟಿಕೆಗಳಲ್ಲಿ ನಾವು ಭಾಗವಹಿಸಿದರೆ ಮಾತ್ರ ಸಂಸ್ಥೆಯ ಧ್ಯೇಯೋದ್ದೇಶಗಳು ಈಡೇರುತ್ತವೆ. ಒಬ್ಬ ವ್ಯಕ್ತಿ ರಕ್ತದಾನ ಮಾಡಿದರೆ ಮೂರು ಜನರ ಜೀವ ಉಳಿಸಿದ ಪುಣ್ಯ ಲಭಿಸುತ್ತದೆ. ಆದ್ದರಿಂದ ರಕ್ತದಾನ ಮಾಡಲು ಆರೋಗ್ಯವಂತರು ಹಿಂಜರಿಯಬಾರದು ಎಂದರು.

ಲಯನ್ಸ್ ಅಧ್ಯಕ್ಷ ಲತೇಶ್ ಮಾತನಾಡಿ, ಈ ಶಿಬಿರದಲ್ಲಿ 40 ಯೂನಿಟ್ ರಕ್ತವನ್ನು ಸಂಗ್ರಹಿಸಲಾಗಿದೆ. 13 ರೋಗಿಗಗಳು ಅಮ ಕಣ್ಣಿನ ಆಸ್ಪತ್ರೆಯಲ್ಲಿ ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆಗೆ ಒಳಗಾಗಿದ್ದು 200ಕ್ಕೂ ಅಧಿಕ ಮಂದಿ ರಕ್ತದೊತ್ತಡ, ಮಧುಮೇಹ ತಪಾಸಣೆ ಮಾಡಿಸಿಕೊಂಡಿದ್ದಾರೆ ಎಂದರು.

ಲಯನ್ಸ್ ಕಾರ್ಯದರ್ಶಿ ಪ್ರವೀಣ್, ಖಜಾಂಚಿ ದೇವೇಂದ್ರ, ಎನ್.ವೈ. ದಿನೇಶ್, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯ ಡಾ. ಪ್ರವೀಣ್, ರಘು, ಚಂದ್ರಶೇಖರ್, ಶಿವಕುಮಾರ್, ಮೇಘರಾಜ್, ರತನ್ ಕುಮಾರ್ ಇತರರಿದ್ದರು.

# ನವೋದಯ ವಿದ್ಯಾಸಂಸ್ಥೆ ಗತವೈಭವ ಮರುಸ್ಥಾಪನೆಗೆ ಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ನವೋದಯ ವಿದ್ಯಾ ಸಂಸ್ಥೆಯ ಗತವೈಭವವನ್ನು ಮರುಸ್ಥಾಪನೆ ಮಾಡಲು ಸಂಸ್ಥೆಯ ಅಧ್ಯಕ್ಷ ಮುರಾರ್ಜಿ ಮಂಜಣ್ಣ ಅವರ ನೇತೃತ್ವದಲ್ಲಿ ಶ್ರಮಿಸುವುದಾಗಿ ಸಂಸ್ಥೆಯ ನಿರ್ದೇಶಕ ಕಾಳೇನಹಳ್ಳಿ ಆನಂದ್ ತಿಳಿಸಿದರು.

ನವೋದಯ ವಿದ್ಯಾ ಸಂಸ್ಥೆಯಲ್ಲಿ ನಡೆದ ಪೋಷಕರ ಸಭೆಯಲ್ಲಿ ಮಾತನಾಡಿ, ಇಲ್ಲಿ ವಿದ್ಯಾಭ್ಯಾಸ ಮಾಡಿ ದೇಶ ವಿದೇಶಗಳಲ್ಲಿ ಸೇವೆ ಸಲ್ಲಿಸುತ್ತಿರುವ ಹಲವಾರು ಹಳೆಯ ವಿದ್ಯಾರ್ಥಿಗಳ ಸಹಾಯ ಮತ್ತು ಸಹಕಾರದಿಂದ ಶಾಲೆಯನ್ನು ಮಾದರಿ ಶಾಲೆಯನ್ನಾಗಿ ಮಾಡುವುದಾಗಿ ಭರವಸೆ ನೀಡಿದರು. ತಾಲೂಕಿನ ಹಲವಾರು ಸಮಾಜಮುಖಿ ಸಾರ್ವಜನಿಕರಿಂದ ಸಲಹೆ ಸಹಕಾರ ಪಡೆದು ನವೋದಯ ಶಾಲೆಯನ್ನು ನವೀಕರಣ ಮಾಡಿ ತಾಲೂಕಿನ ಖಾಸಗಿ ಶಾಲೆಗಳಿಗೆ ಪೈಪೋಟಿಯಾಗಿ ನವೋದಯ ವಿದ್ಯಾ ಸಂಸ್ಥೆಯನ್ನು ಅಭಿವೃದ್ಧಿಪಡಿಸುವುದಾಗಿ ತಿಳಿಸಿದರು.




ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ನಮ ಶಾಲೆಯ ವಿದ್ಯಾರ್ಥಿಗಳು ನೂರಕ್ಕೆ ನೂರರಷ್ಟು ಫಲಿತಾಂಶವನ್ನು ತರುವ ಮೂಲಕ ಶಾಲೆಯ ಕೀರ್ತಿಯನ್ನು ಮನವಿ ಮಾಡಿದರು. ರಾಜ್ಯದಲ್ಲಿ ಸ್ವಾತಂತ್ರ್ಯ ಪೂರ್ವದಲ್ಲಿ ಸ್ಥಾಪನೆಯಾದ ನವೋದಯ ವಿದ್ಯಾಸಂಸ್ಥೆಯು ತನ್ನದೇಯಾದ ಇತಿಹಾಸ ಹೊಂದಿದೆ. ಇಂತಹ ಐತಿಹಾಸಿಕ ಹಿನ್ನೆಲೆ ಹೊಂದಿರುವ ನವೋದಯ ವಿದ್ಯಾ ಸಂಸ್ಥೆಯನ್ನು ಮಾದರಿ ಶಾಲೆಯನ್ನಾಗಿ ಮಾಡುವ ಹೊಸ ಯೋಜನೆಯನ್ನು ರೂಪಿಸಲಾಗಿದೆ ಎಂದರು.

ನಮ ನವೋದಯ ವಿದ್ಯಾ ಸಂಸ್ಥೆಯ ಅಭಿವೃದ್ಧಿಗೆ 4 ಟನ್ ಕಬ್ಬಿಣ ನೀಡುವುದಾಗಿ ಘೋಷಣೆ ಮಾಡಿದ ಬೆಕ್ಕ ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷ ಹಾಗೂ ಸಮಾಜ ಸೇವಕ ಕೇಶವಮೂರ್ತಿ ಅವರನ್ನು ಸನಾನಿಸಿ ಗೌರವಿಸಲಾಯಿತು.

ಕನ್ನಡ ಸಾಹಿತ್ಯ ಪರಿಷತ್ತಿನ ಮಾಜಿ ಗೌರವಾಧ್ಯಕ್ಷ ರವಿ ನಾಕಲಗೂಡು ಮಾತನಾಡಿ, ಜಿಲ್ಲೆಯಲ್ಲಿ ಅತ್ಯುತ್ತಮ ಶಿಕ್ಷಣ ಸಂಸ್ಥೆ ಎಂದು ಹೆಸರು ಪಡೆದಿರುವ ನವೋದಯ ವಿದ್ಯಾ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಿರುವ ಹಲವಾರು ವಿದ್ಯಾರ್ಥಿಗಳು ದೇಶದ ವಿವಿಧ ರಾಜ್ಯಗಳಲ್ಲಿ ಅತ್ಯುನ್ನತವಾದ ಸರ್ಕಾರಿ ಮತ್ತು ಖಾಸಗಿ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವುದು ತುಂಬಾ ಸಂತೋಷದ ವಿಚಾರ ಎಂದರು.

ಇತಿಹಾಸ ಇರುವ ವಿದ್ಯಾ ಸಂಸ್ಥೆಯಲ್ಲಿ ಪ್ರವೇಶವನ್ನು ಪಡೆಯಲು ಶಾಸಕರು ಹಾಗೂ ಲೋಕಸಭಾ ಸದಸ್ಯರಿಂದ ಶಿಫಾರಸ್ಸು ಪತ್ರ ಪಡೆಯಲು ಪೈಪೋಟಿ ನಡೆಸುತ್ತಿದ್ದ ದಿನಗಳನ್ನು ಮರೆಯುವಂತಿಲ್ಲ. ಹಲವು ಮಹನೀಯರ ನಿಸ್ವಾರ್ಥ ಸೇವೆಯಿಂದ ನವೋದಯ ಎಂಬ ಶಿಕ್ಷಣ ಸಂಸ್ಥೆಯು ತಾಲೂಕಿನ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಹಾಗೂ ಬಡವರ್ಗದ ವಿದ್ಯಾರ್ಥಿಗಳಿಗೆ ಕಡಿಮೆ ವೆಚ್ಚದಲ್ಲಿ ಶಿಕ್ಷಣವನ್ನು ನೀಡುತ್ತಾ ಬಂದಿರುವುದು ಇತಿಹಾಸದ ಪುಟದಲ್ಲಿ ದಾಖಲಾಗಿದೆ ಎಂದರು. ನಿವೃತ್ತ ಕಮಾಂಡರ್ ವೆಂಕಟೇಶ್ ಮಾತನಾಡಿ, ಮುಂಬರುವ ದಿನಗಳಲ್ಲಿ ನವೋದಯ ವಿದ್ಯಾ ಸಂಸ್ಥೆಯ ಆವರಣದಲ್ಲಿ ಭಾರತೀಯ ಸೇನೆಗೆ ಸೇರಲು ತರಬೇತಿ ನೀಡಲಾಗುವುದು. ಈ ಅವಕಾಶವನ್ನು ಎಸ್‌ಎಸ್‌ಎಲ್‌ಸಿ ಮುಗಿಸಿರುವ ಎಲ್ಲಾ ವಿದ್ಯಾರ್ಥಿಗಳು ಸದುಪಯೋಗ ಪಡಿಸಿಕೊಳ್ಳಬೇಕೆಂದು ತಿಳಿಸಿದರು.

ನಿರ್ದೇಶಕರಾದ ಮರುವನಹಳ್ಳಿ ಸಂತೋಷ್, ಗನ್ನಿ ಗಿರೀಶ್, ಪ್ರಾಂಶುಪಾಲ ಸಂಜಯ್ ಕುಮಾರ್, ಉಪ ಪ್ರಾಂಶುಪಾಲ ಸ್ವಾಗತಹಳ್ಳಿ ಸುರೇಶ್, ಮುಖ್ಯೋಪಾಧ್ಯಾಯ ಸೀತಾರಾಮ್ ನಾಯಕ್ ಇತರರಿದ್ದರು.

# ಹಸಿರು ಹಾಸನ ಸಂಕಲ್ಪದೊಂದಿಗೆ 5 ಲಕ್ಷ ಗಿಡ ಬೆಳಸಲು ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಸಿರು ಹಾಸನ ಸಂಕಲ್ಪದೊಂದಿಗೆ ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಸರ್ಕಾರಿ ಜಾಗ, ಕಚೇರಿಗಳ ಆವರಣದಲ್ಲಿ 5 ಲಕ್ಷ ಗಿಡಗಳನ್ನು ಬೆಳೆಸಲು ಅಗತ್ಯ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ವಿವಿಧ ಯೋಜನೆಯಡಿ ಹಾಗೂ ತೆರಿಗೆಗಳ ವಸೂಲಾತಿ ಹಾಗೂ ಎ.ಬಿ.ಸಿ ನಿಯಮ ಅನುಷ್ಠಾನದಲ್ಲಿ ಸಾಧಿಸಿರುವ ಪ್ರಗತಿ ಪರಿಶೀಲನಾ ಸಭೆ ಹಾಗೂ ಹಸಿರು ಹಾಸನ 2026ರ ನಿರ್ಮಾಣ ಕುರಿತು ಸಭೆಯಲ್ಲಿ ಮಾತನಾಡಿದರು.

ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ




ಇರುವ ಸರ್ಕಾರಿ ಕಚೇರಿ, ಸರ್ಕಾರಿ ಜಮೀನು ಹಾಗೂ ಶಾಲೆಗಳು ಆವರಣಗಳಿಗೆ ಸುಮಾರು 5 ಲಕ್ಷ ಹಣ್ಣಿನ ಹಾಗೂ ಇತರೆ ಗಿಡಗಳನ್ನು ನೆಟ್ಟು ಬೆಳಸಲು ಕ್ರಿಯಾಯೋಜನೆ ಹಾಗೂ ಜಾಗಗಳು ಗುರುತಿಸಲು ಸೂಚಿಸಿದರು. ಒಂದು ಗಿಡ ಬೆಳೆಸಿ ಮರವನ್ನಾಗಿಸಿದ್ದರೆ ನೂರಾರು ಪಕ್ಷಿಗಳಿಗೆ ಆಶ್ರಯ ತಾಣವಾಗುತ್ತದೆ, ಪ್ರಾಣಿಗಳಿಗೆ ನೆರಳಾಗುತ್ತದೆ, ಆಮ್ಲಜನಕ ಸಿಗುತ್ತದೆ ಹಾಗೂ ಹಣ್ಣಿನ ಮರವಾದರೆ ಹಣ್ಣು ಸಿಗುತ್ತದೆ, ಆದ್ದರಿಂದ ಗಿಡಗಳನ್ನು ನೆಟ್ಟು ಬೆಳಸಬೇಕು ಎಂದರು.

ಜಿಲ್ಲೆಯಲ್ಲಿರುವ ಪ್ರತಿ ಗ್ರಾಮ ಪಂಚಾಯಿತಿಗಳಿಗೆ 2000 ಗಿಡಗಳನ್ನು ನಿಗದಿ ಪಡಿಸುವಂತೆ ಹಾಗೂ ಮಹಾನಗರ ಪಾಲಿಕೆ, ನಗರ ಸಭೆ, ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ನಗರ ರಸ್ತೆಗಳ ಬದಿಯಲ್ಲಿ ಗಿಡಗಳನ್ನು ಹೆಚ್ಚಾಗಿ ಬೆಳಸಬೇಕು, ಹಸಿರು ಹಾಸನ ಜಿಲ್ಲೆಯ ನಿರ್ಮಾಣಕ್ಕೆ ಎಲ್ಲಾ ಅಧಿಕಾರಿಗಳು ಸಂಕಲ್ಪ ಮಾಡಬೇಕು ಎಂದರು.

ಸಭೆ ಸಮಾರಂಭಗಳಲ್ಲಿ ಹೂವಿನ ಹಾರ ಬೊಕ್ಕೆ ಶಾಲು ನೀಡುವ ಬದಲಾಗಿ ಹಣ್ಣಿನ ಗಿಡ ಸೇರಿದಂತೆ ಇತರೆ ಯಾವುದೇ ಗಿಡವನ್ನು ನೀಡುವುದರಿಂದ ಗಿಡ ಮರಗಳನ್ನು ಬೆಳೆಸಿದ್ದಂತಾಗುತ್ತದೆ ಎಂದರು ತಿಳಿಸಿದರು

ಹಾಸ್ಟೆಲ್ ಗಳು ಆವರಣದಲ್ಲಿ, ವಸತಿ ಶಾಲೆಗಳ ಆವರಣದಲ್ಲಿ ಹಾಗೂ ಸರ್ಕಾರಿ ಗೋಮಾಳ, ಕೆರೆಗಳ ಸುತ್ತ ಚಿಕ್ಕ ಉದ್ಯಾನವನ ಗಿಡಗಳನ್ನು ನೆಡುವ ಕೆಲಸವಾಗಬೇಕು ಎಂದರು.

ಬೀದಿ ನಾಯಿಗಳ ಆವಳಿಯನ್ನು ತಪ್ಪಿಸಲು ಸುಪ್ರೀಂ ಕೋರ್ಟ್ ಆದೇಶದಂತೆ ಹಾಗೂ ಸರ್ಕಾರದ ಕಾರ್ಯದರ್ಶಿಯವರ ನಿರ್ದೇಶನ ಕಡ್ಡಾಯವಾಗಿ ಸ್ಥಳೀಯ ಸಂಸ್ಥೆಗಳಿಗೆ ಪಾಲಿಸಬೇಕು, ಕಚೇರಿ, ಖಾಸಗಿ ಸಂಸ್ಥೆಗಳ ಆವರಣದಲ್ಲಿ ಬೀದಿ ನಾಯಿಗಳು ಇಲ್ಲದಂತೆ ನೋಡಿಕೊಳ್ಳುವುದು ಕಚೇರಿ ಸಂಸ್ಥೆಗಳ ಮುಖ್ಯಸ್ಥರ ಜವಾಬ್ದಾರಿಯಾಗಿರುತ್ತದೆ, ಕಾಂಪೌಂಡ್ ನಿರ್ಮಾಣ ಮಾಡಿಕೊಂಡು ನಾಯಿಗಳು ವಾಸವಿರದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ರುದ್ರಮುನಿ ಇತರರಿದ್ದರು.

# ವಿವಿಧ ಬೇಡಿಕೆ ಈಡೇರಿಕೆಗೆ ಭೂ ಮಾಪಕರ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಸಮಾನ ಕೆಲಸಕ್ಕೆ ಸಮಾನ ವೇತನ ಸೇರಿದಂತೆ ಸರ್ಕಾರ ಭೂ ಮಾಪಕರ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಅಖಿಲ ಕರ್ನಾಟಕ ರಾಜ್ಯ ಪರವಾನಗಿ ಭೂ ಮಾಪಕರ ಸಂಘದ ನಿರ್ದೇಶಕ ವಿ. ಹೇಮಂತ ಕುಮಾರ್ ಆಗ್ರಹಿಸಿದರು.

ಪಟ್ಟಣದ ಮಿನಿ ವಿಧಾನಸೌಧದಲ್ಲಿ ತಾಲೂಕು ಭೂ ದಾಖಲೆಗಳ ಸಹಾಯಕ ನಿರ್ದೇಶಕ ಸುಂದರ್ ಅವರಿಗೆ ಮನವಿ ಸಲ್ಲಿಸಿ ಮಾತನಾಡಿದ ಅವರು, ಭೂ ಮಾಪಕರು ತಮ ಬೇಡಿಕೆಗಳ ಈಡೇರಿಕೆಗಾಗಿ



ಹಲವಾರು ಸಲ ಮನವಿ ಮಾಡಿದರೂ ಪ್ರಯೋಜ ಆಗಿಲ್ಲ. ಮುಷ್ಕರ ನಿರತ ಭೂ ಮಾಪಕರಿಗೆ ಹುಸಿ ಭರವಸೆಗಳನ್ನು ನೀಡಲಾಗುತ್ತಿದೆ ಎಂದರು.

ಸೇವಾ ಭದ್ರತೆ, ಜೀವ ವಿಮೆ ಹಾಗೂ ಜವಾನರ ನೇಮಕ ಮಾಡುವಂತೆ ಮುಷ್ಕರ ಹೂಡಿದ್ದು ಈ ಸಂಬಧ ಪರವಾನಗಿ ಭೂ ಮಾಪಕರು ತಮ ಲಾಗಿನ್ ನಲ್ಲಿರುವ ಕಡತಗಳನ್ನು ರೈತರಿಗೆ ಸರ್ವೇ ಕೆಲಸಗಳಲ್ಲಿ ತೊಂದರೆಯಾಗದಂತೆ ವಾಪಸ್ ಪಡೆಯಲು ಭೂ ದಾಖಲೆಗಳ ಸಹಾಯಕ ನಿರ್ದೇಶಕರಿಗೆ ಮನವಿ ಸಲ್ಲಿಸಲಾಗಿದೆ ಎಂದು ಹೇಳಿದರು.

ಪರಿವೀಕ್ಷಕ ಅನಂತ, ರಾಜ್ಯ ಪರವಾನಗಿ ಭೂ ಮಾಪಕರ ಸಂಘದ ತಾಲೂಕು ಘಟಕದ ಸಂಘದ ಅಧ್ಯಕ್ಷ ತುಳಸಿರಾಮ್, ಉಪಾಧ್ಯಕ್ಷ ಕೆ.ಜೆ.ಕುಮಾರ್, ಖಜಾಂಚಿ ಬಿ.ಎಂ. ಶಿವರಾಜ್, ವಿಷಯ ನಿರ್ವಾಹಕ ಡಿ.ಎನ್. ಸುಮರಾಣಿ, ಸದಸ್ಯರಾದ ಎಸ್.ಟಿ. ಮೋಹನ್, ರವೀಂದ್ರ, ಬಿ.ಎಂ. ಆದರ್ಶ ಇತರರಿದ್ದರು.

# ಗ್ಯಾರಂಟಿ ಯೋಜನೆಗಳಿಂದ ಜನರ ಬದುಕು ಸುಧಾರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ರಾಜ್ಯ ಸರ್ಕಾರ ರಾಜ್ಯದ ಪ್ರತಿ ಕುಟುಂಬಕ್ಕೂ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಅನುಕೂಲ ಮಾಡಿಕೊಟ್ಟಿದೆ ಎಂದು ಸಂಸದ ಶ್ರೇಯಸ್ ಪಟೇಲ್ ಹೇಳಿದರು.

ಪಟ್ಟಣದ ಗಣಪತಿ ಪೆಂಡಾಲ್‌ನಲ್ಲಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯಿಂದ ಆಯೋಜಿಸಿದ್ದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಾರ್ಥಕ ಸಮಾವೇಶ ಹಾಗೂ ಪ್ರಗತಿ ಪರಿಶೀಲನಾ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ನಮ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಾದ ಸ್ತ್ರೀ




ಶಕ್ತಿ, ಗೃಹಜ್ಯೋತಿ, ಗೃಹಲಕ್ಷ್ಮಿ, ಅನ್ನಭಾಗ್ಯ ಮತ್ತು ಯುವನಿಧಿ ಯೋಜನೆ ಅನೇಕರಿಗೆ ನೆರವಾಗಿದೆ ಎಂದರು.

ಪ್ರತಿ ಕುಟುಂಬಕ್ಕೆ ಸರ್ಕಾರದಿಂದ ಕನಿಷ್ಟ 5 ರಿಂದ 8 ಸಾವಿರ ರೂ. ತಲುಪುತ್ತಿದೆ. ಇದರಿಂದ ದೈನಂದಿನ ಆರ್ಥಿಕ ಚಟುವಟಿಕೆಗಳಿಗೆ ಸಮಸ್ಯೆಯಾಗುತ್ತಿಲ್ಲ. ಗೃಹ ಲಕ್ಷ್ಮಿ ಯೋಜನೆಯಿಂದ ಅನೇಕ ಮಹಿಳೆಯರು ಸ್ವಉದ್ಯೋಗ ಮಾಡಿಕೊಂಡಿದ್ದಾರೆ ಎಂದರು.

ಗ್ಯಾರಂಟಿ ಯೋಜನೆಗಳ ಮೇಲ್ವಿಚಾರಣೆಗಾಗಿ ಸರ್ಕಾರ ಅನುಷ್ಠಾನ ಸಮಿತಿಯನ್ನೂ ರಚಿಸಿದೆ. ಫಲಾನುಭವಿಗಳು ಏನೇ ಸಮಸ್ಯೆಯಿದ್ದರೂ ಸಂಬಂಧಪಟ್ಟ ಅಧಿಕಾರಿ ಹಾಗು ಸಮಿತಿ ಪದಾಧಿಕಾರಿಗಳನ್ನು ಸಂಪರ್ಕಿಸಬಹುದು. ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಸಹಾಯವಾಣಿ ತೆರೆಯಲಾಗಿದೆ. ಅಲ್ಲಿ ದೂರು ದಾಖಲಿಸುವ ಮೂಲಕ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬಹುದು. ಅನ್ನಭಾಗ್ಯ ಯೋಜನೆಯಲ್ಲಿ ಇತ್ತೀಚಿನ ದಿನಗಳಲ್ಲಿ ಮೊಬೈಲ್ ಹಣ ವರ್ಗಾವಣೆ ಸಂಬಂಧ ಬಿಪಿಎಲ್ ಕಾರ್ಡ್‌ಗಳು ರದ್ದಾಗಿದ್ದು, ಅದರ ಬಗ್ಗೆ ಅಹಾರ ನಿರೀಕ್ಷಕರಿಗೆ ಅಗತ್ಯ ದಾಖಲೆ ನೀಡಿ, ಸಮಸ್ಯೆ ನಿವಾರಣೆ ಮಾಡಿಕೊಳ್ಳಬಹುದು ಎಂದರು.

ತಾಲ್ಲೂಕು ಪಂಚಾಯಿತಿ ಸೇರಿ ವಿವಿಧ ಇಲಾಖೆಗಳ ಅಧಿಕಾರಿಗಳು ನಮ ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಜನರಿಗೆ ತಲುಪಿಸುವಲ್ಲಿ ಉತ್ತಮ ಸೇವೆ ಸಲ್ಲಿಸುತ್ತಿದ್ದಾರೆಂದು ಮೆಚ್ಚುಗೆ ವ್ಯಕ್ತಪಡಿಸಿದರು.

## ಇತಿಹಾಸದಲ್ಲಿ ಈ ದಿನ

### ಮಾರ್ಚ್-06

**1521:** ವಿಶ್ವ ಪರಿಕ್ರಮಣಕ್ಕೆ ಹೊರಟ ಪೋರ್ಚುಗೀಸ್ ಸಮುದ್ರಯಾನಿ ಫರ್ಡಿನ್ಯಾಂಡ್ ಮ್ಯಾಗೆಲ್ಲನ್ ಅವರ ದಂಡು ಗುವಾಮ್ ದ್ವೀಪ ತಲುಪಿತು.

**1836:** ಟೆಕ್ಸಾಸ್ ಕ್ರಾಂತಿಯ ವೇಳೆ ನಡೆದ ಅಲಾಮೋ ಯುದ್ಧದಲ್ಲಿ ಮೆಕ್ಸಿಕೊ ಸೇನೆ ಕೋಟೆಯನ್ನು ವಶಪಡಿಸಿಕೊಂಡಿತು.

**1899:** ಜರ್ಮನ್ ರಸಾಯನಶಾಸ್ತ್ರಜ್ಞ ಫೆಲಿಕ್ಸ್‌ಹೋಫ್ಮಾನ್ ಅಭಿವೃದ್ಧಿಪಡಿಸಿದ ನೋವು ನಿವಾರಕ ಔಷಧ ಆಸ್ಪಿರಿನ್ ಪೇಟೆಂಟ್ ಪಡೆದಿತು.

**1930:** ಭಾರತದ ಸ್ವಾತಂತ್ರ್ಯ ಹೋರಾಟದ ಭಾಗವಾಗಿ ಮಹಾತ ಗಾಂಧಿ ಅವರು ಉಪ್ಪು ಕಾಯ್ದೆ ವಿರುದ್ಧ ಸತ್ಯಾಗ್ರಹ ಆರಂಭಿಸುವ ನಿರ್ಧಾರ ಪ್ರಕಟಿಸಿದರು.

**1957:** ಘಾನಾ ದೇಶವು ಬ್ರಿಟನ್‌ನಿಂದ ಸ್ವಾತಂತ್ರ್ಯ ಪಡೆದುಕೊಂಡು ಆಫ್ರಿಕಾದ ಮೊದಲ ಸ್ವತಂತ್ರ ರಾಷ್ಟ್ರಗಳಲ್ಲಿ ಒಂದಾಯಿತು.

**ಜನನ**

**1475:** ಮೈಕೆಲ್ ಏಂಜಲೋ, ಪ್ರಸಿದ್ಧ ಶಿಲ್ಪಿ ಮತ್ತು ಚಿತ್ರಕಾರ

**ಮರಣ**

**1986:** ಜಾರ್ಜಿಯಾ ಓಕೀಫ್, ಪ್ರಸಿದ್ಧ ಅಮೆರಿಕನ್ ಚಿತ್ರಕಾರ್ತಿ

# ಪರೀಕ್ಷೆ ಭಯವಲ್ಲ ಅವಕಾಶ: ವಿದ್ಯಾರ್ಥಿಗಳಿಗೆ ಮಾರ್ಗದರ್ಶಿ

**- ವಿಶ್ವಾಸ್ ಡಿ.ಗೌಡ**

ಪ್ರಸ್ತುತ ರಾಜ್ಯದಾದ್ಯಂತ ದ್ವಿತೀಯ ಪಿಯುಸಿ ಪರೀಕ್ಷೆಗಳು ನಡೆಯುತ್ತಿವೆ. ಇದೇ ಸಮಯದಲ್ಲಿ ಮುಂದಿನ ದಿನಗಳಲ್ಲಿ ಎಸ್ ಎಸ್‌ಎಲ್‌ಸಿ ಪರೀಕ್ಷೆಗಳೂ ಆರಂಭವಾಗಲಿವೆ. ವಿದ್ಯಾರ್ಥಿಗಳ ಜೀವನದಲ್ಲಿ ಈ ಎರಡೂ ಪರೀಕ್ಷೆಗಳು ಮಹತ್ವದ ಘಟ್ಟವಾಗಿವೆ. ಈ ಹಂತದಲ್ಲಿ ಹಲವಾರು ವಿದ್ಯಾರ್ಥಿಗಳು ಆತಂಕ, ಒತ್ತಡ ಮತ್ತು ಭಯದಿಂದ ಬಳಲುವುದು ಸಹಜ. ಆದರೆ ಪರೀಕ್ಷೆಯನ್ನು ಭಯದಿಂದ ಅಲ್ಲ, ಧೈರ್ಯ ಮತ್ತು ಆತವಿಶ್ವಾಸದಿಂದ ಎದುರಿಸುವುದು ಯಶಸ್ಸಿನ ಮೊದಲ ಹೆಜ್ಜೆಯಾಗಿದೆ. ಒಬ್ಬ ಶಿಕ್ಷಕರಾಗಿ ಕೆಲವು ಸರಳ. ಆದರೆ ಪರಿಣಾಮಕಾರಿ ಸಲಹೆಗಳನ್ನು ವಿದ್ಯಾರ್ಥಿಗಳಿಗೆ ನೀಡುವುದು ಅಗತ್ಯವಾಗಿದೆ.

ಮೊದಲನೆಯದಾಗಿ ವಿದ್ಯಾರ್ಥಿಗಳು ಪೂರ್ವ ತಯಾರಿಯ ಮಹತ್ವವನ್ನು ಅರಿತುಕೊಳ್ಳಬೇಕು. ಪರೀಕ್ಷೆ ಹತ್ತಿರ ಬಂದಾಗ ಮಾತ್ರ ಓದುವುದಕ್ಕಿಂತ ವರ್ಷಪೂರ್ತಿ ಯೋಜಿತವಾಗಿ ಓದುವುದು ಉತ್ತಮ. ಪ್ರತಿದಿನ ಸ್ವಲ್ಪ ಸಮಯ ಮೀಸಲಿಟ್ಟು ಪಾಠಗಳನ್ನು ಪುನರವಲೋಕನ ಮಾಡುವುದು ಬಹಳ ಉಪಯುಕ್ತ. ದಿನಚರಿ ರೂಪಿಸಿಕೊಂಡು ಅದರ ಪ್ರಕಾರ ಓದಿದರೆ ವಿಷಯಗಳನ್ನು ಸುಲಭವಾಗಿ ನೆನಪಿನಲ್ಲಿ ಉಳಿಸಿಕೊಳ್ಳಬಹುದು.

ಎರಡನೆಯದಾಗಿ ಮಾದರಿ ಪ್ರಶ್ನೆಪತ್ರಿಕೆಗಳನ್ನು ಅಭ್ಯಾಸ ಮಾಡುವ ಅಭ್ಯಾಸ ಬೆಳೆಸಿಕೊಳ್ಳಬೇಕು. ಹಳೆಯ ಪ್ರಶ್ನೆ ಪತ್ರಿಕೆಗಳನ್ನು ಬಗೆಹರಿಸುವುದರಿಂದ ಪ್ರಶ್ನೆಗಳ ಸ್ವರೂಪ ತಿಳಿಯುತ್ತದೆ ಮತ್ತು ಸಮಯ ನಿರ್ವಹಣೆಯೂ ಕಲಿಯಬಹುದು. ಪರೀಕ್ಷೆಯಲ್ಲಿ ಸಮಯವನ್ನು ಸರಿಯಾಗಿ ಬಳಸುವುದು ಅತ್ಯಂತ ಮುಖ್ಯ.



ಆದ್ದರಿಂದ ಅಭ್ಯಾಸ ಮಾಡುವಾಗಲೇ ಸಮಯವನ್ನು ಗಮನದಲ್ಲಿಟ್ಟುಕೊಂಡು ಬರೆಯುವ ಅಭ್ಯಾಸ ಮಾಡಬೇಕು.

ಮೂರನೆಯದಾಗಿ ಆತ ವಿಶ್ವಾಸವನ್ನು ಕಾಪಾಡಿಕೊಳ್ಳುವುದು ಬಹಳ ಮುಖ್ಯ. 'ನನಗೆ ಸಾಧ್ಯ' ಎಂಬ ಮನೋಭಾವ ವಿದ್ಯಾರ್ಥಿಗಳಲ್ಲಿ ಇರಬೇಕು. ಕೆಲವು ಪ್ರಶ್ನೆಗಳು ಕಠಿಣವಾಗಬಹುದು. ಆದರೆ ಅದರಿಂದ ಹೆದರಬಾರದು. ನಾವು ಓದಿದ ವಿಷಯಗಳ ಮೇಲೆ ನಂಬಿಕೆ ಇಟ್ಟು ಧೈರ್ಯವಾಗಿ ಉತ್ತರ ಬರೆಯಬೇಕು. ಆತವಿಶ್ವಾಸವೇ ಯಶಸ್ಸಿನ ಬಾಗಿಲು ತೆರೆದಿಡುವ ಕೀಲಿಯಾಗಿದೆ.

ನಾಲ್ಕನೆಯದಾಗಿ, ಆರೋಗ್ಯ ಮತ್ತು ವಿಶ್ರಾಂತಿಯ ಮೇಲೂ ಗಮನ ಕೊಡಬೇಕು. ಕೆಲವು ವಿದ್ಯಾರ್ಥಿಗಳು ರಾತ್ರಿ ತುಂಬಾ ಹೊತ್ತು ಓದಿ ನಿದ್ರೆಯನ್ನು ಕಡೆಗಣಿಸುತ್ತಾರೆ. ಆದರೆ ಉತ್ತಮ ನಿದ್ರೆ ಇಲ್ಲದಿದ್ದರೆ ಮನಸ್ಸು ಚುರುಕಾಗಿ ಕೆಲಸ ಮಾಡುವುದಿಲ್ಲ. ದಿನಕ್ಕೆ ಕನಿಷ್ಠ 78 ಗಂಟೆಗಳ ನಿದ್ರೆ ಅಗತ್ಯ. ಜೊತೆಗೆ ಆರೋಗ್ಯಕರ ಆಹಾರ ಸೇವಿಸುವುದು ಮತ್ತು ಸ್ವಲ್ಪ ವ್ಯಾಯಾಮ ಮಾಡುವುದರಿಂದ ಮನಸ್ಸು ಶಾಂತವಾಗಿರುತ್ತದೆ.

ಐದನೆಯದಾಗಿ, ಪರೀಕ್ಷೆ ದಿನದ ಸಿದ್ಧತೆಗೂ ಮಹತ್ವ ಇದೆ. ಪರೀಕ್ಷೆಗೆ ಹೋಗುವ ಮೊದಲು ಅಗತ್ಯವಿರುವ ಎಲ್ಲ ವಸ್ತು, ಪ್ರವೇಶ ಪತ್ರ, ಪೆನ್, ಪೆನ್ಸಿಲ್ ಇತ್ಯಾದಿಗಳನ್ನು ಸಿದ್ಧವಾಗಿಟ್ಟುಕೊಳ್ಳಬೇಕು. ಪರೀಕ್ಷಾ ಕೇಂದ್ರಕ್ಕೆ ಸ್ವಲ್ಪ ಮುಂಚಿತವಾಗಿ ತಲುಪುವುದು ಒಳ್ಳೆಯದು. ಪ್ರಶ್ನೆ ಪತ್ರಿಕೆ ಬಂದಾಗ ಮೊದಲು ಸಂಪೂರ್ಣವಾಗಿ ಓದಿ ನಂತರ ಉತ್ತರ ಬರೆಯಲು ಆರಂಭಿಸಬೇಕು.

ಇನ್ನೂ ಒಂದು ಮುಖ್ಯ ಸಂಗತಿ ಎಂದರೆ ಭಯ ಮತ್ತು ಒತ್ತಡವನ್ನು ದೂರ ಮಾಡುವುದು. ಪರೀಕ್ಷೆ ಜೀವನದ ಅಂತಿಮ ಗುರಿಯಲ್ಲ. ಇದು ಕೇವಲ ಒಂದು ಹಂತ ಮಾತ್ರ. ವಿಫಲತೆ ಬಂದರೂ ಅದನ್ನು ಪಾಠವಾಗಿ ತೆಗೆದುಕೊಂಡು ಮುಂದೆ ಸಾಗಬಹುದು. ಆದ್ದರಿಂದ ಭಯಪಡುವ ಅಗತ್ಯವಿಲ್ಲ. ಧೈರ್ಯ, ಪರಿಶ್ರಮ ಮತ್ತು ಸಕಾರಾತಕ ಮನೋಭಾವ ಇದ್ದರೆ ಯಶಸ್ಸು ಖಚಿತ.

ಕೊನೆಯದಾಗಿ ಪೋಷಕರು ಮತ್ತು ಶಿಕ್ಷಕರು ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡಬೇಕು. ಅವರ ಮೇಲೆ ಅನಾವಶ್ಯಕ ಒತ್ತಡ ಹಾಕದೇ, ಧೈರ್ಯ ತುಂಬುವ ಮಾತುಗಳನ್ನು ಹೇಳಬೇಕು. ವಿದ್ಯಾರ್ಥಿಗಳು ತಮ ಸಾಮರ್ಥ್ಯದ ಮೇಲೆ ನಂಬಿಕೆ ಇಟ್ಟು, ಶಾಂತ ಮನಸ್ಸಿನಿಂದ ಪರೀಕ್ಷೆಯನ್ನು ಎದುರಿಸಿದರೆ ಉತ್ತಮ ಫಲಿತಾಂಶವನ್ನು ಸಾಧಿಸಬಹುದು.

ಪರೀಕ್ಷೆಗಳು ನಮ ಸಾಮರ್ಥ್ಯವನ್ನು ತೋರಿಸಿಕೊಳ್ಳುವ ಅವಕಾಶಗಳಾಗಿವೆ. ಆದ್ದರಿಂದ ವಿದ್ಯಾರ್ಥಿಗಳು ಭಯವನ್ನು ಬದಿಗಿಟ್ಟು ಆತವಿಶ್ವಾಸದಿಂದ ಮುಂದುವರಿದರೆ ಅವರ ಯಶಸ್ಸಿನ ಪಥ ಸುಗಮವಾಗುತ್ತದೆ. ಧೈರ್ಯ, ಪರಿಶ್ರಮ ಮತ್ತು ಸರಿಯಾದ ತಯಾರಿ. ಇವೇ ಯಶಸ್ಸಿನ ಮಂತ್ರಗಳು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248